# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 824 (994) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24/02/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯಿಂದ ಅಸಂಘಟಿತ ವಲಯದಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ದೊರಕುವ ಸೌಲಭ್ಯಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳು ಹಾಗೂ ಅವುಗಳ ಜಾರಿಗಾಗಿ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಯಿಸಲಾಗುತ್ತಿದ್ದು, ಮಂಡಳಿಯ ಫಲಾನುಭವಿಗಳು ಮತ್ತು ಅವರ ಅವಲಂಬಿತರಿಗಾಗಿ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದ್ದು, ವಿವರವನ್ನು ಅನುಬಂಧ-01ರಲ್ಲಿ ನೀಡಲಾಗಿದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>(1) **<u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-</u>**<br><br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಹಾಗೂ ಪ್ರಗತಿ ಈ ಕೆಳಗಿನಂತಿದೆ.<br><br>(ಅ) **ಅಪಘಾತ ಪರಿಹಾರ ಸೌಲಭ್ಯ:** ಯೋಜನೆಯಡಿ, ಅಪಘಾತದಿಂದಾದ ಮರಣ ಹೊಂದಿದ ಪ್ರಕರಣಗಳಲ್ಲಿ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೂ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ. |

| | | |
|---|---|---|
| | | (ಆ) **ಶೈಕ್ಷಣಿಕ ಧನ ಸಹಾಯ:** ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>**(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಈ ಯೋಜನೆಯಡಿ 11 ಅಸಂಘಟಿತ ವಲಯಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಲಾಗುತ್ತಿದೆ. |
| ಆ) | ಧಾರವಾಡ-ಗದಗ-ಹಾವೇರಿ ಜಿಲ್ಲೆಯಲ್ಲಿ ವಾಸಿಸುತ್ತಿರುವ ಅಸಂಘಟಿತ ವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು; | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಧಾರವಾಡ-ಗದಗ-ಹಾವೇರಿ ಜಿಲ್ಲೆಯಲ್ಲಿನ ಅಸಂಘಟಿತ ವಲಯದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯಲ್ಲಿ ಫಲಾನುಭವಿಗಳಾಗಿ ನೋಂದಣಿಯಾಗಿರುವ ಸಂಖ್ಯೆ ಈ ಕೆಳಕಂಡಂತ್ತಿದೆ.<br>ಧಾರವಾಡ : 77984<br>ಗದಗ : 65982<br>ಹಾವೇರಿ: 58295<br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಅಸಂಘಟಿತ ಕಾರ್ಮಿಕರ ಶ್ರೇಯೋಭಿವೃದ್ಧಿಯ ಪ್ರಮುಖ ಉದ್ದೇಶವನ್ನೊಳಗೊಂಡು ರಚಿತವಾಗಿದ್ದು, ಅಸಂಘಟಿತ ಕಾರ್ಮಿಕರ ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ಈವರೆಗೆ ಕಾರ್ಮಿಕ ಇಲಾಖೆ ವತಿಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ ಅಸಂಘಟಿತ ಕಾರ್ಮಿಕರ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ. ಆದರೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಹಾಗೂ ಕೋವಿಡ್-19 ಪರಿಹಾರಕ್ಕಾಗಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ಸಂಖ್ಯೆ ಲಭ್ಯವಿದ್ದು, ವಿವರ ಈ ಕೆಳಗಿನಂತಿದೆ:- |

| ಯೋಜನೆಗಳು/ ಕಾರ್ಯಕ್ರಮ | ಧಾರವಾಡ ಜಿಲ್ಲೆಯಲ್ಲಿ ನೋಂದಾಯಿತ ಕಾರ್ಮಿಕರ ಸಂಖ್ಯೆ | ಗದಗ ಜಿಲ್ಲೆಯಲ್ಲಿ ನೋಂದಾಯಿತ ಕಾರ್ಮಿಕರ ಸಂಖ್ಯೆ | ಹಾವೇರಿ ಜಿಲ್ಲೆಯಲ್ಲಿ ನೋಂದಾಯಿತ ಕಾರ್ಮಿಕರ ಸಂಖ್ಯೆ |
|---|---|---|---|
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 14199 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ) | 13822 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ) | 10681 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ) |
| ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ | 5874 | 5177 | 5458 |
| ಕೋವಿಡ್-19ರ ವಿಶೇಷ ಪ್ಯಾಕೇಜ್ | 62934 | 33873 | 48732 |
| ಇ-ಶ್ರಮ್ ಕಾರ್ಯಕ್ರಮದಡಿ ನೋಂದಣಿಯಾದ ಅಸಂಘಟಿತ ಕಾರ್ಮಿಕರು | 172783 | 99585 | 215805 |
| ಒಟ್ಟು | **2,55,790** | **1,52,457** | **280676** |

ಇ) ಧಾರವಾಡ-ಗದಗ-ಹಾವೇರಿ ಜಿಲ್ಲೆಯಲ್ಲಿ ವಾಸಿಸುತ್ತಿರುವ ಅಸಂಘಟಿತ ವಲಯ ಕಾರ್ಮಿಕರಿಗೆ 2018 ರಿಂದ 2020ನೇ ಸಾಲಿನವರೆಗೆ ದೊರೆಕಿರುವ ಸೌಲಭ್ಯಗಳೇನು?

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**

ಧಾರವಾಡ-ಗದಗ-ಹಾವೇರಿ ಜಿಲ್ಲೆಯಲ್ಲಿ ವಾಸಿಸುತ್ತಿರುವ ಅಸಂಘಟಿತ ವಲಯದ ನೋಂದಣಿಯಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 2018-ರಿಂದ 2020ನೇ ಸಾಲಿನವರೆಗೆ ಮಂಡಳಿ ವತಿಯಿಂದ ವಿತರಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-1**ರಲ್ಲಿ ಸಲ್ಲಿಸಿದೆ.

ಮಂಡಳಿಯಿಂದ ಕೋವಿಡ್-19 ರ ಮೊದಲೇ ಅಲೆ ಸಂದರ್ಭದಲ್ಲಿ ಒಂದು ಬಾರಿ ಪರಿಹಾರ ಧನವನ್ನು ತಲಾ ರೂ.5000/- ಗಳಂತೆ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ವಿತರಿಸಿದ ವಿವರ ಈ ಕೆಳಕಂಡಂತ್ತಿದೆ:-

| ಕ್ರಸಂ | ಜಿಲ್ಲೆಯ ಹೆಸರು | ರೂ.5000/- ಗಳನ್ನು ಪಡೆದ ಫಲಾನುಭವಿಗಳ ಸಂಖ್ಯೆ |
|---|---|---|
| 1 | ಧಾರವಾಡ | 77,085 |
| 2 | ಗದಗ | 23,849 |
| 3 | ಹಾವೇರಿ | 44,376 |

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಳೆದ ಮೂರು ವರ್ಷಗಳಲ್ಲಿ ಒದಗಿಸಿರುವ ಸೌಲಭ್ಯಗಳ ವಿವರ ಈ ಕೆಳಗಿನಂತಿದೆ:

1. **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**

(ಅ) **ಅಪಘಾತ ಪರಿಹಾರ ಸೌಲಭ್ಯ:-**

| ಜಿಲ್ಲೆ | 2018-19 | | 2019-20 | | 2020-21 | |
|---|---|---|---|---|---|---|
| | ಪ್ರಕರಣಗಳ ಸಂಖ್ಯೆ | ಪರಿಹಾರದ ಮೊತ್ತ | ಪ್ರಕರಣಗಳ ಸಂಖ್ಯೆ | ಪರಿಹಾರದ ಮೊತ್ತ | ಪ್ರಕರಣಗಳ ಸಂಖ್ಯೆ | ಪರಿಹಾರದ ಮೊತ್ತ |
| ಧಾರವಾಡ | - | - | 03 | 15,00,000 | 12 | 6000000 |
| ಗದಗ | - | - | - | - | 2 | 1000000 |
| ಹಾವೇರಿ | - | - | - | - | - | - |

(ಆ) **ಶೈಕ್ಷಣಿಕ ಧನ ಸಹಾಯ:-**

| ಜಿಲ್ಲೆ | 2018-19 | | 2019-20 | | 2020-21 | |
|---|---|---|---|---|---|---|
| | ವಿದ್ಯಾರ್ಥಿಗಳ ಸಂಖ್ಯೆ | ಧನ ಸಹಾಯದ ಮೊತ್ತ | ವಿದ್ಯಾರ್ಥಿಗಳ ಸಂಖ್ಯೆ | ಧನ ಸಹಾಯದ ಮೊತ್ತ | ವಿದ್ಯಾರ್ಥಿಗಳ ಸಂಖ್ಯೆ | ಧನ ಸಹಾಯದ ಮೊತ್ತ |
| ಧಾರವಾಡ | 5 | 50000 | 6 | 60000 | 7 | 70000 |
| ಗದಗ | 2 | 20000 | 2 | 20000 | 2 | 20000 |
| ಹಾವೇರಿ | 7 | 70000 | 5 | 50000 | 11 | 110000 |

(2) **ಕೋವಿಡ್-19 ರ ವಿಶೇಷ ಪ್ಯಾಕೇಜ್‌ಗಳಡಿ ನೀಡಿರುವ ಸೌಲಭ್ಯ:-**

- 2020ನೇ ವರ್ಷದ ಕೋವಿಡ್-19ರ ಮೊದಲನೆ ಅಲೆಯ ಲಾಕ್‌ಡೌನ್ ಸಂದರ್ಭದಲ್ಲಿ, ಅಗಸ ಮತ್ತು ಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ **124968** ಅಸಂಘಟಿತ ಕಾರ್ಮಿಕರಿಗೆ ತಲಾ ರೂ.5,000/-ಗಳಂತೆ ಒಟ್ಟು ರೂ.**62.48** ಲಕ್ಷಗಳ ಒಂದು ಬಾರಿಯ ನೆರವನ್ನು ವಿತರಿಸಲಾಗಿದೆ.

| | | |
|---|---|---|
| | | ➢ 2021ನೇ ವರ್ಷದ ಕೋವಿಡ್-19ರ ಎರಡನೇ ಅಲೆಯ ಲಾಕ್‌ಡೌನ್ ಸಂದರ್ಭದಲ್ಲಿ, 11 ವರ್ಗಗಳಾದ ಅಸಂಘಟಿತ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹಕಾರ್ಮಿಕರು, ಟೈಲರ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿಕಾರ್ಮಿಕ ವರ್ಗಕ್ಕೆ ಸೇರಿದ **1189490** ಕಾರ್ಮಿಕರಿಗೆ ತಲಾ ರೂ.2,000/-ಗಳಂತೆ ಒಟ್ಟು ರೂ. **237.89** ಲಕ್ಷಗಳ ಒಂದು ಬಾರಿಯ ನೆರವನ್ನು ವಿತರಿಸಲಾಗಿದೆ. |

**ಕಾಇ 118 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ-1

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ  ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 824 (994)

ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ **ರೂ.2,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ** (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯಅವಲಂಭಿತರಿಗೆ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. **30,000/-** ಮತ್ತುಗಂಡು ಮಗುವಿನ ಜನನಕ್ಕೆರೂ.**20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |

| | | |
|---|---|---|
| 10 | ಎಲ್ಎಲ್‌ಬಿ / ಎಲ್ಎಲ್ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು |
| ತಾಂತ್ರೀಕ/ ವೈದ್ಯಕೀಯಎನ್ಇಇಟಿಅಥವಾ ಕೆಸಿಇಟಿ | | |
| 12 | ಬಿಇ / ಬಿ.ಟೆಕ್ಅಥವಾ ಸಂಬಂಧಪಟ್ಟಯೂಜಿಕೋರ್ಸ್ | ಸದರಿ<br>ಕೋರ್ಸ್‌ನ ಗರಿಷ್ಠ 2 ವರ್ಷ ಅವಧಿಗೆ<br>ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ಎಸ್ / ಬಿಡಿಎಸ್ /ಬಿಹೆಚ್ಎಮ್ಎಸ್ಕೋರ್ಸ್‌ಗೆಅಥವಾಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಆಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ ಎಐಐಎಮ್ಎಸ್ /ಎನ್ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಭಿತರಿಗೆರೂ.300/- ರಿಂದರೂ.10,000/-ವರೆಗೆ

13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿರೂ.5,00,000/-, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ ರೂ.2,00,000/- ಮತ್ತುಭಾಗಶಃ ಶಾಶ್ವತದುರ್ಬಲತೆಯಾದಲ್ಲಿ ರೂ.1,00,000/-

14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ **ರೂ.50,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತುಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲುತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತಕಾರ್ಮಿಕರಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ**ರೂ.6,000/-** ಗಳ ಸಹಾಯಧನ.